**All India Radio: Bangalore**
**National Bulletin In Kannada**
**01.04.2025 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

- ಆರ್‌ಬಿಐನ ೯೦ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭದಲ್ಲಿಂದು ಭಾಗವಹಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
- ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ-ಚಿಲಿ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಅವರೊಂದಿಗೆ ಸಮಾಲೋಚನೆ
- ಹೊಸ ಹಣಕಾಸು ವರ್ಷ ಆರಂಭ; ಪ್ರಮುಖ ತೆರಿಗೆ ಹಾಗೂ ಹಣಕಾಸು ಬದಲಾವಣೆಗಳು ಇಂದಿನಿಂದ ಜಾರಿ
- ವಕ್ಫ್ ತಿದ್ದುಪಡಿ ಮಸೂದೆ ಕುರಿತು ತಪ್ಪು ಮಾಹಿತಿ ಹರಡದಂತೆ ವಿರೋಧ ಪಕ್ಷಗಳಲ್ಲಿ ಕೇಂದ್ರ ಸಚಿವ ಕಿರಣ್ ರಿಜಿಜು ಮನವಿ
- ಐಪಿಎಲ್ ಟಿ-೨೦ ಕ್ರಿಕೆಟ್; ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೮ ವಿಕೆಟ್ ಜಯ

*****************

ಮುಂಬೈನಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐನ ೯೦ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಭಾಗವಹಿಸಲಿದ್ದಾರೆ. ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಮತ್ತು ಇತರ ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಸ್ವಾಗತ ಭಾಷಣ ಮಾಡಲಿದ್ದಾರೆ.

ರಾಷ್ಟ್ರಪತಿ ಮುರ್ಮು ಎರಡು ದಿನಗಳ ಮುಂಬೈ ಭೇಟಿಗಾಗಿ ನಿನ್ನೆ ಸಂಜೆ ಮುಂಬೈಗೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ಗವರ್ನರ್ ಸಿ.ಪಿ. ರಾಧಾಕೃಷ್ಣನ್ ಮತ್ತು ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಬರಮಾಡಿಕೊಂಡರು.

*****************

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ಇಂದು ಚಿಲಿ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್ ಬೋರಿಕ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಐದು ದಿನಗಳ ಭಾರತ ಭೇಟಿಯಲ್ಲಿರುವ ಚಿಲಿ ಅಧ್ಯಕ್ಷರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ರಾಷ್ಟ್ರಪತಿಯವರು, ಚಿಲಿ ಅಧ್ಯಕ್ಷರ ಗೌರವಾರ್ಥವಾಗಿ ಔತಣಕೂಟವನ್ನು ಆಯೋಜಿಸಲಿದ್ದಾರೆ.

ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಅವರೊಂದಿಗೆ ಸಚಿವರು, ಸಂಸತ್ ಸದಸ್ಯರು, ವ್ಯಾಪಾರ ಸಂಘಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಆಗಮಿಸಿದೆ. ಅಧ್ಯಕ್ಷರಾಗಿ ಬೋರಿಕ್ ಅವರು ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಏಪ್ರಿಲ್ ೫ ರಂದು ಚಿಲಿಗೆ ಮರಳುವ ಮೊದಲು ಅವರು ಆಗ್ರಾ, ಮುಂಬೈ ಮತ್ತು ಬೆಂಗಳೂರಿಗೆ ಭೇಟಿ ನೀಡಲಿದ್ದಾರೆ.

ಮುಂಬೈ ಮತ್ತು ಬೆಂಗಳೂರಿನಲ್ಲಿ ಅವರು, ರಾಜಕೀಯ ನಾಯಕರು, ವ್ಯಾಪಾರ ಮತ್ತು ಕೈಗಾರಿಕಾ ಪ್ರತಿನಿಧಿಗಳು, ನವೋದ್ಯಮಗಳು, ನಾವೀನ್ಯಕಾರರು ಮತ್ತು ತಂತ್ರಜ್ಞಾನ ನಾಯಕರನ್ನು ಭೇಟಿ ಮಾಡಲಿದ್ದಾರೆ.

*****************

ಇಂದು ಹೊಸ ಹಣಕಾಸು ವರ್ಷ ಪ್ರಾರಂಭವಾಗಲಿದ್ದು, ಕೆಲವು ಪ್ರಮುಖ ತೆರಿಗೆ ಹಾಗೂ ಹಣಕಾಸು ಬದಲಾವಣೆಗಳು ಮತ್ತು ಕೆಲವು ನೀತಿ ಸುಧಾರಣೆಗಳು ಜಾರಿಗೆ ಬರಲಿವೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಹೊಸ ಆದಾಯ ತೆರಿಗೆ ಸ್ಲ್ಯಾಬ್‌ಗಳು ಈ ಹಣಕಾಸು ವರ್ಷದಿಂದ ಅನ್ವಯವಾಗಲಿವೆ.

ನಾಳೆಯಿಂದ, ೧೨ ಲಕ್ಷ ರೂಪಾಯಿ ಬಳ ಪಡೆಯುವ ವ್ಯಕ್ತಿಯು ಹೊಸ ತೆರಿಗೆ ವ್ಯವಸ್ಥೆ ಆರಿಸಿಕೊಂಡರೆ, ಯಾವುದೇ ತೆರಿಗೆಯನ್ನು ಪಾವತಿಸಬೇಕಾಗಿಲ್ಲ.

ಡಿಜಿಟಲ್ ಪಾವತಿಗಳು ಇಂದಿನಿಂದ ಹೊಸ ಬದಲಾವಣೆಯನ್ನು ಹೊಂದಿರುತ್ತವೆ. ದೀರ್ಘಕಾಲದ ನಿಷ್ಕ್ರಿಯ ಸ್ಥಿತಿಯಿಂದ ಇರುವ ಮೊಬೈಲ್ ಸಂಖ್ಯೆಗಳಿಗೆ ಯುಪಿಐ ಪಾವತಿ ಇರುವುದಿಲ್ಲ.

ಎಲ್ಲಾ ಬ್ಯಾಂಕ್ ಗ್ರಾಹಕರು ತಮ್ಮ ಖಾತೆಗಳಲ್ಲಿ ಕನಿಷ್ಠ ಬ್ಯಾಲೆನ್ಸ್ ಹೊಂದಿರುವುದು ಕಡ್ಡಾಯವಾಗಲಿದೆ. ಒಂದು ವೇಳೆ ವಿಫಲವಾದರೆ ಬ್ಯಾಂಕ್ ಭಾರಿ ದಂಡ ವಿಧಿಸಬಹುದಾಗಿದೆ.

*****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ನವದೆಹಲಿಯಲ್ಲಿ ನೀತಿ ಎನ್‌ಸಿಎಇಆರ್ ರಾಜ್ಯ ಆರ್ಥಿಕ ವೇದಿಕೆ ಪೋರ್ಟಲ್‌ಗೆ ಚಾಲನೆ ನೀಡಲಿದ್ದಾರೆ.

ನೀತಿ ಆಯೋಗ ಅನ್ವಯಿತ ಆರ್ಥಿಕ ಸಂಶೋಧನಾ ರಾಷ್ಟ್ರೀಯ ಮಂಡಳಿ ಸಹಯೋಗದಲ್ಲಿ ಈ ಪೋರ್ಟಲ್ ಅನ್ನು ಅಭಿವೃದ್ಧಿ ಪಡಿಸಿದೆ.

*****************

ವಕ್ಫ್ ತಿದ್ದುಪಡಿ ಮಸೂದೆಯ ಬಗ್ಗೆ ಜನರಿಗೆ ತಪ್ಪು ಮಾಹಿತಿ ನೀಡಿ ದಾರಿ ತಪ್ಪಿಸಬೇಡಿ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವಿರೋಧ ಪಕ್ಷಗಳಲ್ಲಿ ಮನವಿ ಮಾಡಿದ್ದಾರೆ. ವಕ್ಫ್ ತಿದ್ದುಪಡಿ ಮಸೂದೆಯನ್ನು ಸಂಸತ್ತಿನಲ್ಲಿ ಮಂಡಿಸಿದಾಗ ಅದರ ಕುರಿತು ವಿವರವಾದ ಚರ್ಚೆಯಲ್ಲಿ ಭಾಗವಹಿಸುವಂತೆ ಎಲ್ಲಾ ರಾಜಕೀಯ ಪಕ್ಷಗಳಿಗೆ ಕೋರಿದ್ದಾರೆ.

ಮಸೂದೆ ಸಿದ್ಧವಾಗಿದೆ ಮತ್ತು ಕೆಲವು ನಾಯಕರು ಮಸೂದೆಯ ಬಗ್ಗೆ ತಪ್ಪು ಮಾಹಿತಿ ಹಂಚುತ್ತಿದ್ದಾರೆ. ಇದು ಸಮಾಜ ಮತ್ತು ರಾಷ್ಟ್ರಕ್ಕೆ ತುಂಬಾ ಹಾನಿಕಾರಕವಾಗಿದೆ ಎಂದು ಹೇಳಿದರು.

ಧ್ವನಿ - ಕಿರಣ್ ರಿಜಿಜು

ಏತನ್ಮಧ್ಯೆ, ವಕ್ಫ್ ಕಾಯ್ದೆ ಕುರಿತು ಹೇಳಿಕೆ ಬಿಡುಗಡೆಗೊಳಿಸಿರುವ ಭಾರತದ ಕ್ಯಾಥೋಲಿಕ್ ಬಿಷಪ್‌ಗಳ ಸಮ್ಮೇಳನ, ಸಿಬಿಸಿಐ, ಅಸ್ತಿತ್ವದಲ್ಲಿರುವ ಕೇಂದ್ರ ವಕ್ಫ್ ಕಾಯ್ದೆಯಲ್ಲಿನ ಕೆಲವು ನಿಬಂಧನೆಗಳು ಸಂವಿಧಾನಕ್ಕೆ ಹೊಂದಿಕೆಯಾಗುವುದಿಲ್ಲ ಮತ್ತು ಕೇರಳದ ವಕ್ಫ್ ಮಂಡಳಿಯು ಮುನಂಬಮ್ ಪ್ರದೇಶದ ೬೦೦ಕ್ಕೂ ಹೆಚ್ಚು ಕುಟುಂಬಗಳ ಪೂರ್ವಜರ ವಸತಿ ಆಸ್ತಿಗಳನ್ನು ವಕ್ಫ್ ಭೂಮಿ ಎಂದು ಘೋಷಿಸಲು ಈ ನಿಬಂಧನೆಗಳನ್ನು ಬಳಸಿದೆ ಎಂದು ತಿಳಿಸಿದೆ.

ಕಾನೂನು ತಿದ್ದುಪಡಿ ಮಾತ್ರ ಈ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬಹುದು. ಈ ವಿಷಯದ ಕುರಿತಂತೆ ರಚನಾತ್ಮಕ ವಿಧಾನವನ್ನು ಅಳವಡಿಸಿಕೊಂಡು, ನಿಷ್ಪಕ್ಷಪಾತವಾಗಿ ತೀರ್ಮಾನತೆಗೆದುಕೊಳ್ಳಲು ಸಿಬಿಸಿಐ ರಾಜಕೀಯ ಪಕ್ಷಗಳು ಮತ್ತು ಶಾಸಕರನ್ನು ಆಗ್ರಹಿಸಿದೆ.

*****************

ಉಜ್ಜಯಿನಿ, ಓಂಕಾರೇಶ್ವರ, ಮಹೇಶ್ವರ ಮತ್ತು ಮೈಹಾರ್ ಸೇರಿದಂತೆ ಮಧ್ಯಪ್ರದೇಶದ ಆಯ್ದ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯ ೧೯ ಧಾರ್ಮಿಕ ನಗರಗಳು ಮತ್ತು ಪ್ರದೇಶಗಳಲ್ಲಿ ಮದ್ಯ ನಿಷೇಧ ಇಂದು ಜಾರಿಗೆ ಬರಲಿದೆ.

ಉಜ್ಜಯಿನಿ, ಓಂಕಾರೇಶ್ವರ, ಮಹೇಶ್ವರ, ಮಂಡ್ಲೇಶ್ವರ, ಓರ್ಚಾ, ಮೈಹಾರ್, ಚಿತ್ರಕೂಟ, ದಾಟಿಯಾ, ಪನ್ನಾ, ಮಂಡ್ಲಾ, ಮುಲ್ತೈ, ಮಂಡ್ಸೌರ್ ಮತ್ತು ಅಮರಕಾಂತಕ್ ನಗರ ಮಿತಿಗಳಲ್ಲಿ ಎಲ್ಲಾ ಮದ್ಯದ ಅಂಗಡಿಗಳು ಮತ್ತು ಬಾರ್‌ಗಳನ್ನು ಮುಚ್ಚಲಾಗುವುದು ಎಂದು ಸರ್ಕಾರಿ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ.

ಬಿಜೆಪಿ ಸರ್ಕಾರ ಈ ೧೯ ನಗರ ಮತ್ತು ಗ್ರಾಮೀಣ ಪ್ರದೇಶಗಳನ್ನು ಸಂಪೂರ್ಣವಾಗಿ ಪವಿತ್ರವೆಂದು ಘೋಷಿಸಿದ್ದು, ಅವುಗಳ ವ್ಯಾಪ್ತಿಯಲ್ಲಿ ಸಂಪೂರ್ಣ ಮದ್ಯ ನಿಷೇಧವನ್ನು ವಿಧಿಸಿದೆ.

*****************

ನವದೆಹಲಿಯಲ್ಲಿ ಇಂದು ಸಿಬಿಐ ತನ್ನ ೬೨ನೇ ಸಂಸ್ಥಾಪನಾ ದಿನದ ಸಂದರ್ಭದಲ್ಲಿ ೨೧ನೇ ಡಿ.ಪಿ.ಕೊಹ್ಲಿ ಸ್ಮಾರಕ ಉಪನ್ಯಾಸವನ್ನು ಆಯೋಜಿಸಿದೆ.

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರು ಈ ಸಂದರ್ಭದಲ್ಲಿ ವಿಕಸಿತ ಭಾರತ್ ೨೦೪೭ ಸಿಬಿಐಗಾಗಿ ಒಂದು ಮಾರ್ಗಸೂಚಿ ಕುರಿತಂತೆ ಡಿ.ಪಿ.ಕೊಹ್ಲಿ ಸ್ಮಾರಕ ಉಪನ್ಯಾಸವನ್ನು ನೀಡಲಿದ್ದಾರೆ.

ವಿಶಿಷ್ಟ ಸೇವೆಗಳಿಗಾಗಿ ರಾಷ್ಟ್ರಪತಿಗಳ ಪೊಲೀಸ್ ಪದಕಗಳನ್ನು ಮತ್ತು ಗಣನೀಯ ಸೇವೆಗಾಗಿ ಪೊಲೀಸ್ ಪದಕಗಳನ್ನು ಸಿಬಿಐ ಅಧಿಕಾರಿಗಳಿಗೆ ಸಚಿವರು ಪ್ರದಾನ ಮಾಡಲಿದ್ದಾರೆ.

****************

ಆಪರೇಷನ್ ಬ್ರಹ್ಮ ಅಡಿಯಲ್ಲಿ, ಐಎನ್ಎಸ್ ಸತ್ಪುರ ಮತ್ತು ಐಎನ್ಎಸ್ ಸಾವಿತ್ರಿ ಹೊತ್ತೊಯ್ದ ೫೦ ಟನ್ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ -ಎಚ್ಎಡಿಆರ್ ಸಾಮಗ್ರಿಗಳನ್ನು ನಿನ್ನೆ ಯಾಂಗೊನ್‌ನಲ್ಲಿ ಮ್ಯಾನ್ಮಾರ್ ಅಧಿಕಾರಿಗಳಿಗೆ ಹಸ್ತಾಂತರಿಸಲಾಯಿತು.

ಮ್ಯಾನ್ಮಾರ್‌ನಲ್ಲಿರುವ ಭಾರತದ ರಾಯಭಾರಿ ಅಭಯ್ ಠಾಕೂರ್ ಅವರು ಪರಿಹಾರ ಸಾಮಗ್ರಿಗಳನ್ನು ಹಸ್ತಾಂತರಿಸಿದರು., ಆರು ಭಾರತೀಯ ವಾಯುಪಡೆಯ ವಿಮಾನಗಳು ಮತ್ತು ಐದು ಭಾರತೀಯ ನೌಕಾಪಡೆಯ ಹಡಗುಗಳೊಂದಿಗೆ, ಭಾರತದ ದೊಡ್ಡ ಪ್ರಮಾಣದ ಪ್ರಥಮ-ಪ್ರತಿಕ್ರಿಯೆ ಸಹಾಯವನ್ನು ಯಾಂಗೊನ್, ನೇಪಿತಾವ್ ಮತ್ತು ಮಂಡಲೆಗೆ ತಲುಪಿಸಲಾಗಿದೆ ಎಂದು ಯಾಂಗೊನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ.

****************

ಬಹು ವಲಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರಕ್ಕಾಗಿ ಬಂಗಾಳ ಕೊಲ್ಲಿ ಉಪಕ್ರಮ- ಬಿಮ್‌ಸ್ಟೆಕ್ ಸದಸ್ಯ ರಾಷ್ಟ್ರಗಳ ಮುಖ್ಯಸ್ಥರು ಮತ್ತು ಸರ್ಕಾರಗಳ ೬ನೇ ಶೃಂಗಸಭೆಯು ಇದೇ ೪ ರಂದು ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ನಡೆಯಲಿದೆ.

ಸಮೃದ್ಧ, ಸ್ಥಿತಿಸ್ಥಾಪಕ ಮತ್ತು ಮುಕ್ತ ಬಿಮ್‌ಸ್ಟೆಕ್ ಈ ಬಾರಿಯ ಶೃಂಗಸಭೆಯ ವಿಷಯವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ೩ ರಂದು ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಥೈಲ್ಯಾಂಡ್‌ಗೆ ಎರಡು ದಿನಗಳ ಭೇಟಿಯನ್ನು ನೀಡಲಿದ್ದಾರೆ.

ಭದ್ರತೆ ಮತ್ತು ಅಭಿವೃದ್ಧಿ ಸವಾಲುಗಳನ್ನು ಪರಿಹರಿಸಲು ಸದಸ್ಯ ರಾಷ್ಟ್ರಗಳ ನಡುವೆ ಸಹಯೋಗವನ್ನು ಬೆಳೆಸುವ ಗುರಿಯನ್ನು ಶೃಂಗಸಭೆ ಹೊಂದಿದೆ.. ಬಿಮ್‌ಸ್ಟೆಕ್ ಬಂಗಾಳ ಕೊಲ್ಲಿ ಪ್ರದೇಶದ ಏಳು ದೇಶಗಳನ್ನು ಒಳಗೊಂಡಿದೆ. ಇದರಲ್ಲಿ ಬಾಂಗ್ಲಾದೇಶ, ಭೂತಾನ್, ಭಾರತ, ಮ್ಯಾನ್ಮಾರ್, ನೇಪಾಳ, ಶ್ರೀಲಂಕಾ ಮತ್ತು ಥೈಲ್ಯಾಂಡ್ ಸೇರಿವೆ.

****************

ಮುಂಬೈನ ವಾಂಖೇಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಇಂಡಿಯನ್ ಪ್ರಿಮಿಯರ್ ಲೀಗ್ - ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಕೋಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಎಂಟು ವಿಕೆಟ್‌ಗಳಿಂದ ಮಣಿಸಿದೆ.

ಕೋಲ್ಕತ್ತಾ ನೀಡಿದ್ದ ೧೧೭ ರನ್‌ಗಳ ಗುರಿಯನ್ನು ಬೆನ್ನತ್ತಿದ ಮುಂಬೈ ತಂಡ ಕೇವಲ ೧೨.೫ ಓವರ್‌ಗಳಲ್ಲಿ ಎರಡು ವಿಕೆಟ್ ನಷ್ಟಕ್ಕೆ ೧೨೧ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಮುಂಬೈ ಆರಂಭಿಕ ಆಟಗಾರ ರಯಾನ್ ರಿಕಲ್ಟನ್ ೪೧ ಎಸೆತಗಳಲ್ಲಿ ಅಜೇಯ ೬೨ ಹಾಗೂ ಸೂರ್ಯಕುಮಾರ್ ಯಾದವ್ ೨೭ ರನ್ ಗಳಿಸಿದ್ದು, ತಂಡದ ಗೆಲುವಿಗೆ ಸಹಕಾರಿಯಾಯಿತು.

ಉತ್ತರಪ್ರದೇಶದ ಎಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

****************

ಹೀರೋ ಏಷ್ಯಾ ಕಪ್ ಹಾಕಿ ೨೦೨೫ಕ್ಕೆ ಈ ಬಾರಿ ಬಿಹಾರದ ರಾಜಗೀರ್ ಆತಿಥ್ಯ ವಹಿಸಲಿದ್ದು, ಟೂರ್ನಿ ಆಗಸ್ಟ್‌ನಲ್ಲಿ ನಡೆಯಲಿದೆ. ಹಾಕಿ ಇಂಡಿಯಾ ಮತ್ತು ಬಿಹಾರ ರಾಜ್ಯ ಕ್ರೀಡಾ ಪ್ರಾಧಿಕಾರವು ಪಾಟ್ನಾದಲ್ಲಿ ಈ ನಿಟ್ಟಿನಲ್ಲಿ ತಿಳುವಳಿಕೆ ಪತ್ರಕ್ಕೆ ಸಹಿ ಹಾಕಿವೆ. ಈ ಪಂದ್ಯಾವಳಿಯು ಆಗಸ್ಟ್ ೨೯ ರಿಂದ ಸೆಪ್ಟೆಂಬರ್ ೭ ರವರೆಗೆ ರಾಜ್‌ಗೀರ್ ಹಾಕಿ ಕ್ರೀಡಾಂಗಣದಲ್ಲಿ ನಡೆಯಲಿದೆ.

*********ಮುಕ್ತಾಯ********